ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಸಂಸತ್

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE 21/3/2020

## 23ಕ್ಕೆ ಸಂಸತ್ ಕಲಾಪ ಅವಧಿ ಬದಲು

ಸದ್ಯದ ಬೆಳವಣಿಗೆ ಹಿನ್ನೆಲೆಯಲ್ಲಿ ಸೋಮವಾರ (ಮಾ.23) ಸಂಸತ್ ಕಲಾಪ ಬೆಳಗ್ಗೆ 11 ಗಂಟೆಗೆ ಬದಲು ಮಧ್ಯಾಹ್ನ 2 ಗಂಟೆಯಿಂದ ಶುರುವಾಗಲಿದೆ. ವಿಮಾನ ಪ್ರಯಾಣದ ಮೇಲೆ ಈಗಾಗಲೇ ಹಲವಾರು ನಿಷೇಧ, ನಿಯಂತ್ರಣ ಕ್ರಮಗಳನ್ನು ಹೇರಿರುವ ಹಿನ್ನೆಲೆಯಲ್ಲಿ ತಮ್ಮ ತಮ್ಮ ಕ್ಷೇತ್ರದಿಂದ ನವದೆಹಲಿಗೆ ಆಗಮಿಸಲು ಅನಾನುಕೂಲವಾಗುತ್ತಿದೆ ಎಂದು ಸಂಸದರು ಸ್ಪೀಕರ್ ಓಂ ಬಿರ್ಲಾಗೆ ಮನವಿ ಮಾಡಿಕೊಂಡ ಹಿನ್ನೆಲೆಯಲ್ಲಿ ಈ ನಿರ್ಧಾರ ಕೈಗೊಳ್ಳಲಾಗಿದೆ. ಮಾ.23ಕ್ಕೆ ಮಾತ್ರ ಈ ನಿರ್ಧಾರ ಅನ್ವಯವಾಗುತ್ತದೆ ಎಂಬ ಸ್ಪಷ್ಟನೆಯನ್ನೂ ನೀಡಲಾಗಿದೆ. ರಾಜ್ಯಸಭೆಯಲ್ಲಿಯೂ ಇದೇ ಘೋಷಣೆಯನ್ನು ಸಭಾಪತಿ ಎಂ. ವೆಂಕಯ್ಯ ನಾಯ್ಡು ಮಾಡಿದ್ದಾರೆ.